ಟಿ.ಸಿ.ಗಳನ್ನು ಕೊಡುವ ಪ್ರಯತ್ನ ಮಾಡಲಾಗುವುದೆ?

ಇ) ಬರಗಾಲದ ದಿನಗಳಲ್ಲಿ ಜನರ ನೆರವಿಗೆ ಸರ್ಕಾರ ತಕ್ಷಣ ಸ್ಪಂದಿಸಿ ಅಧಿಕಾರಿಗಳಿಗೆ ಆದೇಶ ಮಾಡುವುದರ ಮೂಲಕ ಸಮಸ್ಯೆ ಬಗೆಹರಿಯುವುದೆ?

ಶ್ರೀ ವೀರಕುಮಾರ್ ಅ.ಪಾಟೀಲ್ (ಇಂಧನ ರಾಜ್ಯ ಸಚಿವರು):

ಅ) ಅನಧಿಕೃತ ನೀರಾವರಿ ಪಂಪು ಸೆಟ್ಟುಗಳ ಬಳಕೆಯಿಂದಾಗಿ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳು ಓವರ್ ಲೋಡ್ ಆಗುತ್ತಿರುವುದರಿಂದ, ತುರುವೇಕೆರೆ ತಾಲ್ಲೂಕಿನ ಹಲವಾರು ಗ್ರಾಮಗಳಲ್ಲಿ ಕಡಿಮೆ ವೋಲ್ಟೇಜ್ ಪರಿಸ್ಥಿತಿ ಉಂಟಾಗಲು ಮುಖ್ಯ ಕಾರಣವಾಗಿರುತ್ತದೆ. ಅನಧೀಕೃತ ನೀರಾವರಿ ಪಂಪು ಸೆಟ್ಟುಗಳ ವಿದ್ಯುತ್ ಸಂಪರ್ಕವನ್ನು ಕಡಿತಗೊಳಿಸಲು ಕಟ್ಟುನಿಟ್ಟಿನ ಕ್ರಮವನ್ನು ಕೈಗೊಳ್ಳಲಾಗಿದೆ.

ಆ ಮತ್ತು ಇ) ವೋಲ್ಟೇಜ್ ಸಮಸ್ಯೆ ಇರುವ ಹಳ್ಳಿಗಳಲ್ಲಿ ಹೆಚ್ಚುವರಿ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳನ್ನು ಅಳವಡಿಸಿ, ವೋಲ್ಟೇಜ್ ಸಮಸ್ಯೆಯನ್ನು ನಿವಾರಿಸಲಾಗುತ್ತಿದೆ. ಅಲ್ಲದೆ ಹಾಲಿ ಇರುವ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳನ್ನು ಹೆಚ್ಚುವರಿ ಸಾಮರ್ಥ್ಯದ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳ ಮೂಲಕ, ಅಗತ್ಯವಿರುವ ಕಡೆಗಳಲ್ಲಿ ಬದಲಾಯಿಸಲಾಗುತ್ತಿದೆ. ತುರುವೇಕೆರೆ ತಾಲ್ಲೂಕಿನ ಗ್ರಾಮಾಂತರ ಪ್ರದೇಶಗಳಲ್ಲಿ ದಿನಾಂಕ : 1-4-2000 ದಿಂದ 30-6-2001ರ ಅವಧಿಯಲ್ಲಿ ಒಟ್ಟು 97 ವಿತರಣಾ ಟ್ರಾನ್ಸ್‌ಫಾರ್ಮರ್‌ಗಳನ್ನು ಹೆಚ್ಚುವರಿಯಾಗಿ ಸ್ಥಾಪಿಸಲಾಗಿದೆ. ಹಾಗೂ ಇದೇ ಅವಧಿಯಲ್ಲಿ 74 ವಿತರಣಾ ಟ್ರಾನ್ಸ್‌ಫಾರ್ಮರ್ ಕೇಂದ್ರಗಳ ಸಾಮರ್ಥ್ಯವನ್ನು ಹೆಚ್ಚಳಗೊಳಿಸಲಾಗಿದೆ. ಗ್ರಾಮಾಂತರ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸರಬರಾಜಿಗೆ ತೊಂದರೆ ಆಗದಂತೆ ನೋಡಿಕೊಳ್ಳಲು, ಕುಡಿಯುವ ನೀರಿನ ಸರಬರಾಜಿನ ಸ್ಥಾವರಗಳಿಗೆ ಮೊದಲ ಆದ್ಯತೆ ಮೇರೆಗೆ ವಿದ್ಯುತ್ ಸಂಪರ್ಕವನ್ನು ಕಲ್ಪಿಸಲಾಗುತ್ತಿದೆ.

ತುರುವೇಕೆರೆ ತಾಲ್ಲೂಕು ಬುಡುಗನ ಹಳ್ಳಿ ಗ್ರಾಮದಲ್ಲಿ ಹೇಮಾವತಿ ನೀರು ಹರಿಯುವಾಗ ಅರೆಕೆರೆ ಗ್ರಾಮಸ್ಥರಿಗೆ ಆಗಿರುವ ತೊಂದರೆ.

1669(2291)

ಶ್ರೀ ಲಕ್ಷ್ಮೀನಾರಾಯಣ ಎಂ.ಡಿ.(ತುರುವೇಕೆರೆ): ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ತುರುವೇಕೆರೆ ತಾಲ್ಲೂಕು ಬುಗುಡನ ಹಳ್ಳಿ ಗ್ರಾಮ ಬಹಳ ಕೆಳಮಟ್ಟದಲ್ಲಿದ್ದು, ಹೇಮಾವತಿ ನೀರು ಹರಿಯುವಾಗ ಜನರು ಓಡಾಡಲು ತೊಂದರೆಯಾಗಿದ್ದು, ಇದನ್ನು ತಪ್ಪಿಸಲು ಅಲ್ಲಿನ ಸೇತುವೆ ಹಾಗೂ ರಸ್ತೆ ಸುಮಾರು 3-4 ಅಡಿ ಎತ್ತರಿಸಲು ಸರ್ಕಾರ ಯೋಚಿಸಿದೆಯೇ;

ಆ. ಸುಮಾರು ವರ್ಷಗಳಿಂದ ತೊಂದರೆಗೀಡಾದ ಬುಗುಡನಹಳ್ಳಿ ಹಾಗೂ ಅರಕೆರೆ ಗ್ರಾಮಸ್ಥರಿಗೆ (ಸುಮಾರು 200 ಕುಟುಂಬಗಳು) ಎಂದು ಅನುಕೂಲ ಮಾಡಿಕೊಡಲಾಗುವುದು.

ಇ. ಪ್ರಸಕ್ತ ಸಾಲಿನಲ್ಲಿ ಜನರ ಅನುಕೂಲಕ್ಕಾಗಿ ಈ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದೇ?

ಶ್ರೀ ಎಚ್.ಕೆ.ಪಾಟೀಲ್ (ಜಲ ಸಂಪನ್ಮೂಲ ಮಂತ್ರಿಗಳು):

ಅ. ಸದರಿ ರಸ್ತೆಯು ಈ ಇಲಾಖೆಯ ವ್ಯಾಪ್ತಿಗೆ ಬರುವುದಿಲ್ಲ. ಈ ರಸ್ತೆ ಜಿಲ್ಲಾ ಪಂಚಾಯತ್ ವ್ಯಾಪ್ತಿಗೆ ಬರುವುದು. ಆದರೆ ಈ ರಸ್ತೆಯು ಹೇಮಾವತಿ ನಾಲಾ ಅಚ್ಚುಕಟ್ಟಿನಲ್ಲಿ ಬರುವುದರಿಂದ ನಾಲೆ ಬಸಿ ನೀರಿನಿಂದ ಹಾನಿಯಾಗಿರುವುದು ಇಲಾಖೆಯ ಗಮನಕ್ಕೆ ಬಂದಿದ್ದು, ಸದರಿ ರಸ್ತೆಯನ್ನು ದುರಸ್ಥಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಆ. ಈ ರಸ್ತೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಜಲ ಸಂಪನ್ಮೂಲ ಇಲಾಖೆಗೆ ವಹಿಸಿಕೊಂಡು ನಂತರ ಕ್ರಮ ಕೈಗೊಳ್ಳಲಾಗುವುದು.

ಇ. ಈ ಸಾಲಿನಲ್ಲಿ ಕಾಮಗಾರಿ ಕೈಗೆತ್ತಿಕೊಳ್ಳಲು ಕ್ರಮ ಕೈಗೊಳ್ಳಲಾಗುವುದು.

ಶ್ರೀ ಮಹಾಬಲ ದೇವಸ್ಥಾನ ಟ್ರಸ್ಟಿಗಳಿಂದ ಅವ್ಯವಸ್ಥೆ

1672(1953)

ಶ್ರೀ ಮೋಹನ ಕೆ.ಶೆಟ್ಟ (ಕುಮಟಾ): ಮಾನ್ಯ ಮುಜರಾಯಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ದಕ್ಷಿಣ ಕಾಶಿ ಎಂದೇ ಪುರಾಣ ಪ್ರಸಿದ್ಧವಾದ ಕುಮಟಾ ತಾಲ್ಲೂಕಿನ ಗೋಕರ್ಣ